ಕರ್ನಾಟಕ ಸರ್ಕಾರ

# ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಕನ್ನಡ ಕಾಯಕ ವರ್ಷ 2020-21

ಸಂಖ್ಯೆ: ಕಾಶಿಇ/ಶೈವಿ/11/ಕೋ-19/ವ್ಯಾಕ್ಸಿನ್/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿ ರಸ್ತೆ, ಬೆಂಗಳೂರು-560001,
ದಿನಾಂಕ : 30.07.2021.

## ಜ್ಞಾಪನ

ವಿಷಯ : ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯ ಎಲ್ಲಾ ಪದವಿ/ಇಂಜಿನಿಯರಿಂಗ್/ಪಾಲಿಟೆಕ್ನಿಕ್ ಕಾಲೇಜುಗಳ ವಿದ್ಯಾರ್ಥಿಗಳು, ಕೇಂದ್ರ ಕಛೇರಿ/ಜಂಟಿ ನಿರ್ದೇಶಕರ ಕಛೇರಿಯ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು 2 ನೇ ಡೋಸ್‌ನ ಕೋವಿಡ್ ಲಸಿಕೆ ಹಾಕಿಸಿಕೊಳ್ಳುವ ಕುರಿತು.

ಉಲ್ಲೇಖ :
1. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಕಾಶಿಇ/ಶೈವಿ/10/ಸುತ್ತೋಲೆ/2021-22. ದಿನಾಂಕ: 28.06.2021
2. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಕಾಶಿಇ/ಶೈವಿ/11/ಕೋ19/ವ್ಯಾಕ್ಸಿನ್/2021-22 ದಿನಾಂಕ: 16.04.2021.

* * * * *

ಸೂಚಿತ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಕೋವಿಡ್-19 ಸಾಂಕ್ರಾಮಿಕ ರೋಗವನ್ನು ತಡೆಗಟ್ಟುವ ಹಿನ್ನಲೆಯಲ್ಲಿ ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಪದವಿ, ಪಾಲಿಟೆಕ್ನಿಕ್, ಇಂಜಿನಿಯರಿಂಗ್ ಕಾಲೇಜುಗಳ ವಿದ್ಯಾರ್ಥಿಗಳು, ಬೋಧಕ ಮತ್ತು ಬೋಧಕೇತರ ವರ್ಗದವರು, ಕೇಂದ್ರ ಕಛೇರಿಯ ಅಧಿಕಾರಿ/ಸಿಬ್ಬಂದಿಗಳು ಹಾಗೂ ಎಲ್ಲಾ ಜಂಟಿ ನಿರ್ದೇಶಕರ ಕಛೇರಿಯ ಅಧಿಕಾರಿ/ಸಿಬ್ಬಂದಿಗಳ ಆರೋಗ್ಯದ ಹಿತದೃಷ್ಟಿಯಿಂದ, ಆಯಾ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಕಛೇರಿ ಮುಖ್ಯಸ್ಥರು ಸಂಬಂಧಿಸಿದ ಜಿಲ್ಲಾಧಿಕಾರಿಗಳು, ತಹಶೀಲ್ದಾರ್, ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಲೀಡ್ ಕಾಲೇಜು ಪ್ರಾಂಶುಪಾಲರೊಂದಿಗೆ ಸಮನ್ವಯ ಸಾಧಿಸಿ, ಎರಡನೇ ಡೋಸ್ ಲಸಿಕೆ ಪಡೆಯಲು ಅರ್ಹತೆಯಿರುವವರಿಗೆ ಸ್ಥಳೀಯವಾಗಿ ತಮ್ಮ ಹಂತದಲ್ಲೇ ಲಸಿಕಾ ಅಭಿಯಾನವನ್ನು ನಡೆಸಲು ಅಗತ್ಯ ಕ್ರಮವಹಿಸುವಂತೆ ಸೂಚಿಸಲಾಗಿದೆ.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ

ಇವರಿಗೆ:

1. ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು :

1. ನಿದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ಜಂಟಿ ನಿರ್ದೇಶಕರು, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ ಹಾಗೂ ಕಲಬುರಗಿ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಎಲ್ಲಾ ಜಿಲ್ಲೆಗಳ ಲೀಡ್ ಕಾಲೇಜುಗಳ ಪ್ರಾಂಶುಪಾಲರು, ಕಾಲೇಜು ಶಿಕ್ಷಣ ಇಲಾಖೆ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
4. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ ಬೆಂಗಳೂರು- ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
5. ಕಛೇರಿ ಪ್ರತಿ.